ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

1

ಶಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತು ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ

ದಿನಾಂಕ : DATE : 16/3/21

## ಗಡಿ ಅಭಿವೃದ್ಧಿಗೆ ಹಣ ಕೊಡಿ ಇಲ್ಲಾ ಕನ್ನಡಿಗರಿಗೆ ವಿಷ ಕೊಡಿ: ಯು.ಬಿ.

ವಿಧಾನ ಪರಿಷತ್: ರಾಜ್ಯ ಸರ್ಕಾರ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಹಾಗೂ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ಹೆಚ್ಚಿನ ಅನುದಾನ ನೀಡಬೇಕು.



ಇದಾಗದಿದ್ದರೆ ಕನ್ನಡಿಗರಿಗೆ ವಿಷ ಕೊಡಿ ಎಂದು ಕಾಂಗ್ರೆಸ್ ಸದಸ್ಯ ಯು.ಬಿ.ವೆಂಕಟೇಶ್ ಆಕ್ರೋಶವ್ಯಕ್ತಪಡಿಸಿದರು. ಸೋಮವಾರ ಬಜೆಟ್ ಮೇಲಿನ ಚರ್ಚೆಯಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಮರಾಠ ಅಭಿವೃದ್ಧಿ ನಿಗಮಕ್ಕೆ 50 ಕೋಟಿ ರು. ಅನುದಾನ ನೀಡಿದೆ. ಆದರೆ, ಕನ್ನಡ ಅಭಿವೃದ್ಧಿ ಪ್ರಾಧಿಕಾರಕ್ಕೆ 2 ಕೋಟಿ ಹಾಗೂ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರಕ್ಕೆ ಐದು ಕೋಟಿ ರು. ಮಾತ್ರ ಹಂಚಿಕೆ ಮಾಡಿದೆ. ಈ ಅತ್ಯಲ್ಪದಲ್ಲಿ ಕನ್ನಡ ಅಭಿವೃದ್ಧಿ ಸಾಧ್ಯವೇ? ಕನ್ನಡದ ಬಗ್ಗೆ ಯಾಕಿಷ್ಟು ನಿರ್ಲಕ್ಷ್ಯ? ಮುಖ್ಯಮಂತ್ರಿಗಳೇ ಈ ಎರಡೂ ಪ್ರಾಧಿಕಾರಿಗಳಿಗೆ ಹೆಚ್ಚಿನ ಅನುದಾನ ನೀಡಿ. ಇಲ್ಲವೇ ಕನ್ನಡಿಗರಿಗೆ ವಿಷ ಕೊಡಿ ಎಂದರು.